ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ – ೧**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತನಾಲ್ಕನೇ ಅಧಿವೇಶನ**

**ಮಂಗಳವಾರ, ದಿನಾಂಕ: ೦೬ನೇ ಫೆಬ್ರವರಿ, ೨೦೧೮**

---

## ಸಮೂಹ – II

೧. ಇಂಧನ ಸಚಿವರು

೨. ಕೃಷಿ ಸಚಿವರು

೩. ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

೪. ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು

೫. ಸಹಕಾರ ಸಚಿವರು

೬. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೭. ಜವಳಿ ಹಾಗೂ ಮುಜರಾಯಿ ಸಚಿವರು

---

### ಪಶು ಆಸ್ಪತ್ರೆಗಳಲ್ಲಿ ಸಿಬ್ಬಂದಿಗಳ ಕೊರತೆ ಬಗ್ಗೆ

**ಶ್ರೀ ಎಸ್.ವ್ವಿ. ಸಂಕನೂರು (ಪದವೀಧರರ ಕ್ಷೇತ್ರ)–**

೧ (೪೯) ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಗ್ರಾಮ ಪಂಚಾಯತಿ ಹಂತದಲ್ಲಿರುವ ಒಟ್ಟು ಪಶು ಆಸ್ಪತ್ರೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಗ್ರಾಮ ಪಂಚಾಯ್ತಿ ಹಂತದಲ್ಲಿರುವ ಪಶು ಆಸ್ಪತ್ರೆಗಳಲ್ಲಿ ವೈದ್ಯರು ಹಾಗೂ ಇತರೆ ಸಿಬ್ಬಂದಿಯ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕೊರತೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಪಶು ಆಸ್ಪತ್ರೆಗಳಿಗೆ ಈ ಹಿಂದೆ ಒದಗಿಸಿದ ಚಿಕಿತ್ಸಾ ಸಲಕರಣೆಗಳಾದ ಫ್ರಿಡ್ಜ್ ಇತ್ಯಾದಿ ಉಪಕರಣಗಳು ತುಕ್ಕು ಹಿಡಿದು ಕೆಟ್ಟು ಹೋಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಹೊಸ ಉಪಕರಣಗಳನ್ನು ಪೂರೈಸುವಲ್ಲಿ ಕೈಗೊಳ್ಳಲಾದ ಕ್ರಮಗಳೇನು ;

(ಈ) ಗದಗ ಜಿಲ್ಲೆಯ ಸೊರಟೂರು ಗ್ರಾಮದಲ್ಲಿರುವ ಪಶು ಆಸ್ಪತ್ರೆಯ ಮೇಲ್ಛಾವಣಿ ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದರ ದುರಸ್ಥಿಗಾಗಿ ಕೈಗೊಂಡಿರುವ ಕ್ರಮಗಳೇನು ? (ವಿವರಣೆ ನೀಡುವುದು)

## ಕಲ್ಲಡ್ಕ ಶ್ರೀರಾಮ ಶಾಲೆಗೆ ಕೊಲ್ಲೂರು ದೇವಸ್ಥಾನದಿಂದ ಮಂಜೂರು ಮಾಡಿರುವ ಮಧ್ಯಾಹ್ನದ ಊಟವನ್ನು ತಡೆಹಿಡಿದಿರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨ (೧೬೧) ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೪ ವರ್ಷಗಳಲ್ಲಿ ಎ ದರ್ಜೆಯ ದೇವಸ್ಥಾನಗಳಿಗೆ ಬಂದಿರುವ ಒಟ್ಟು ವಾರ್ಷಿಕ ಆದಾಯವೆಷ್ಟು ; ಸದರಿ ಹಣವನ್ನು ಯಾವ ಯಾವ ಕಾರ್ಯಕ್ರಮಗಳಿಗೆ ವಿನಿಯೋಗಿಸಲಾಗುತ್ತದೆ ;

(ಆ) ಕಳೆದ ೪ ವರ್ಷದಲ್ಲಿ ಯಾವ ಯಾವ ದೇವಸ್ಥಾನಗಳಿಂದ, ಯಾವ ಯಾವ ಶಾಲೆ ಮತ್ತು ವಿದ್ಯಾ ಸಂಸ್ಥೆಗಳಿಗೆ ಮಕ್ಕಳ ಊಟ ಹಾಗು? ಇನ್ನಿತರೆ

ಉದ್ದೇಶಗಳಿಗಾಗಿ ದೇವಸ್ಥಾನದ ಅನುದಾನ/ಆಹಾರ ಸಾಮಗ್ರಿ ಒದಗಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಕೊಲ್ಲೂರು ದೇವಸ್ಥಾನದ ಕಲ್ಲಡ್ಕ ಶ್ರೀರಾಮ ಶಾಲೆಯ ಬಡ ಮಕ್ಕಳಿಗೆ ಹಿಂದಿನ ಸರ್ಕಾರ ಮಂಜೂರು ಮಾಡಿದ್ದ ಉಚಿತ ಊಟದ ವ್ಯವಸ್ಥೆಯನ್ನು ನಿಲುಗಡೆ ಮಾಡಲು ಕಾರಣಗಳೇನು ; ನಿಲುಗಡೆಗೆ ಶಿಫಾರಸ್ಸು ಮಾಡಿದವರ್ಯಾರು ; (ಶಿಫಾರಸ್ಸು ಪತ್ರದ ಪ್ರತಿ ಒದಗಿಸುವುದು)

(ಈ) ಊಟದ ವ್ಯವಸ್ಥೆಯನ್ನು ರದ್ದುಗೊಳಿಸಿದ ಉದ್ದೇಶ ಮತ್ತು ಅಗತ್ಯಗಳೇನು ;

(ಉ) ಪುನಃರಪಿ ಕಲ್ಲಡ್ಕ ಶ್ರೀರಾಮ ಶಾಲೆಯ ಮಕ್ಕಳಿಗೆ ಕೊಲ್ಲೂರು ದೇವಸ್ಥಾನದಿಂದ ಮಧ್ಯಾಹ್ನದ ಊಟ ನೀಡಲು ಸಾರ್ವಜನಿಕರ ಆಗ್ರಹದ ಕುರಿತು ಸರ್ಕಾರದ ನಿಲುವೇನು ; ಈ ಕುರಿತು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ;

## ತಿರುಪತಿ ತಿರುಮಲದಲ್ಲಿ ವಸತಿ ಸೌಕರ್ಯ ಕಲ್ಪಿಸುವ ಬಗ್ಗೆ

**ಶ್ರೀ ಆರ್. ಧರ್ಮಸೇನ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೩ (೪೨) ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ತಿರುಪತಿ ತಿರುಮಲದಲ್ಲಿ ಕರ್ನಾಟಕದ ಯಾತ್ರಾರ್ಥಿಗಳಿಗೆ ವಸತಿ ಸೌಕರ್ಯದ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಸರ್ಕಾರಕ್ಕೆ ಲಭ್ಯವಿರುವ ಜಮೀನಿನಲ್ಲಿ ಹೆಚ್ಚು ಹೆಚ್ಚು ಕಟ್ಟಡ ನಿರ್ಮಾಣ ಕಾರ್ಯವನ್ನು ಮಾಡಿ ವಸತಿ ಸೌಕರ್ಯವನ್ನು ಒದಗಿಸಲು ಸಮರೋಪಾದಿಯಲ್ಲಿ ಕ್ರಮ ಕೈಗೊಳ್ಳಲಾಗುವುದೇ ?

## ಪಶು ವೈದ್ಯಕೀಯ ಕೇಂದ್ರಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ ( ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪ (೩೯) ಪಶು–ಸಂಗೋಪನೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೩ ವರ್ಷಗಳಿಂದ ರಾಜ್ಯದಲ್ಲಿ ಹೊಸದಾಗಿ ಎಷ್ಟು ಪಶು ವೈದ್ಯಕೀಯ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ; ಮುಂದೆ ಎಷ್ಟು ಪಶು ವೈದ್ಯಕೀಯ ಕೇಂದ್ರಗಳನ್ನು ಸ್ಥಾಪಿಸುವ ಉದ್ದೇಶ ಹೊಂದಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪಶು ವೈದ್ಯರ ಕೊರತೆಯಿಂದ ಪಶು ಚಿಕಿತ್ಸಾ ಕೇಂದ್ರಗಳು ಮುಚ್ಚುವ ಹಂತದಲ್ಲಿದ್ದು, ಈ ನಿಟ್ಟಿನಲ್ಲಿ ಇಲಾಖೆ ಯಾವ ಕ್ರಮಗಳನ್ನು ರೂಪಿಸಿಕೊಂಡಿದೆ ; ಇಲಾಖೆ ಹೊಸ ಪಶು ವೈದ್ಯರ ನೇಮಕ ಮಾಡಿಕೊಳ್ಳಲು ಉದ್ದೇಶಿಸಿದೆಯೇ ? (ವಿವರ ನೀಡುವುದು)

## ಕೃಷಿ ಬೆಳೆಗಳ ಉತ್ಪಾದನೆ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) –**

೫(೨೬) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೭–೧೮ನೇ ಸಾಲಿನಲ್ಲಿ ತೊಗರಿ, ಜೋಳ, ರಾಗಿ, ಮೆಕ್ಕೆ ಜೋಳದ ಬೆಳೆಗಳನ್ನು ರಾಜ್ಯಾದ್ಯಂತ ಎಷ್ಟು ಹೆಕ್ಟೇರ್‌ಗಳಲ್ಲಿ ಬೆಳೆಯಲಾಗಿದೆ ; (ವಿವರವಾದ ಮಾಹಿತಿ ನೀಡುವುದು)

(ಆ) ೨೦೧೭–೧೮ನೇ ಸಾಲಿನಲ್ಲಿ ಸದರಿ ಬೆಳೆಗಳಿಗೆ ಬೆಂಬಲ ಬೆಲೆ ನೀಡಿ ಎಷ್ಟು ಪ್ರಮಾಣದಲ್ಲಿ ಖರೀದಿಸಲಾಗಿದೆ ;

(ಇ) ಒಟ್ಟು ಉತ್ಪಾದನೆ ಪೈಕಿ ಎಷ್ಟು ಪ್ರಮಾಣದಲ್ಲಿ ಹೊರ ರಾಜ್ಯಗಳಿಗೆ ರಫ್ತು ಮಾಡಲಾಗಿದೆ ?

## ರೈತರ ಸಾಲ ಮನ್ನಾ ಯೋಜನೆ ಕುರಿತು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ ( ವಿಧಾನ ಸಭೆಯಿಂದ ಚುನಾಯಿತರಾದವರು)–**

೬ (೨೫) ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯದಲ್ಲಿ ಸಹಕಾರಿ ಸಾಲದ ಮೊತ್ತ ಎಷ್ಟು ; ಸಾಲ ತೆಗೆದುಕೊಂಡ ರೈತರ ಸಂಖ್ಯೆ ಎಷ್ಟು ; ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು ;

(ಆ) ಮುಖ್ಯಮಂತ್ರಿಯವರ ಸಾಲಮನ್ನಾ ಯೋಜನೆಯಡಿ ಎಷ್ಟು ರೈತರ ಸಾಲ ಮನ್ನಾ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ಈ ಯೋಜನೆಯಡಿ ಎಷ್ಟು ರೈತ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ; ಈ ಯೋಜನೆಯ ಒಟ್ಟು ಫಲಾನುಭವಿಗಳೆಷ್ಟು ; ಇದಕ್ಕೆ ವಿನಿಯೋಗಿಸಿದ ಮೊತ್ತವೆಷ್ಟು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಈ) ಈ ಯೋಜನೆಯಡಿ ಸಾಲಮನ್ನಾ ಮಾಡಲಾದ ಎಷ್ಟು ಫಲಾನುಭವಿ ರೈತರ ಖಾತೆಗೆ ಈವರೆಗೆ ಹಣ ಜಮೆ ಆಗಿದೆ ಜಮೆ ಆಗಿರುವವರ ಜಿಲ್ಲಾವಾರು, ಫಲಾನುಭವಿವಾರು ಸಂಪೂರ್ಣ ವಿವರ ನೀಡುವುದು ?

## ಲೋಕೋಪಯೋಗಿ ಇಲಾಖೆಯ ಕಟ್ಟಡ ಕಾಮಗಾರಿಗಳ ಕುರಿತು

**ಶ್ರೀ ಪ್ರದೀಪ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೭ (೨೪) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ೩ ವರ್ಷಗಳಿಂದ ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ ಯಾವ ಯಾವ ಕಟ್ಟಡ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ತಾಲ್ಲೂಕುವಾರು, ಕಟ್ಟಡವಾರು, ವರ್ಷವಾರು ಸಂಪೂರ್ಣ ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳಿಗಾಗಿ ಬಿಡುಗಡೆ ಮಾಡಲಾಗಿರುವ ಅನುದಾನವೆಷ್ಟು ; (ವರ್ಷವಾರು, ಕಟ್ಟಡವಾರು ಕಳೆದ ೩ ವರ್ಷಗಳ ವಿವರ ನೀಡುವುದು)

(ಇ) ಈ ಜಿಲ್ಲೆಗಳಲ್ಲಿ ಕೈಗೆತ್ತಿಕೊಳ್ಳಲಾಗಿರುವ ಕಟ್ಟಡ ಕಾಮಗಾರಿಗಳಲ್ಲಿ ಪೂರ್ಣಗೊಳಿಸಲಾಗಿರುವ ಕಾಮಗಾರಿಗಳು ಎಷ್ಟು ; ಅವು ಯಾವುವು ; (ತಾಲ್ಲೂಕುವಾರು, ಕಾಮಗಾರಿವಾರು ಪೂರ್ಣ ವಿವರ ನೀಡುವುದು)

## ವಿದ್ಯುತ್ ಸಮಸ್ಯೆ ನಿವಾರಣೆ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು)** –

೮ (೨೩) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ವಿದ್ಯುತ್ ಸಮಸ್ಯೆ ನಿವಾರಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ವಿದ್ಯುತ್ ಅಭಾವ ಪರಿಸ್ಥಿತಿಗೆ ಕಾರಣಗಳೇನು ; ಇದನ್ನು ಸರಿದೂಗಿಸುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದ ವಿದ್ಯುತ್ ಉತ್ಪಾದನೆಯ ಸಾಮರ್ಥ್ಯವನ್ನು ಹೆಚ್ಚಿಸಲು ಇರುವ ತೊಂದರೆಗಳೇನು ;

(ಇ) ಯಾವ ಯಾವ ಮೂಲಗಳಿಂದ ವಿದ್ಯುತ್ ಉತ್ಪಾದನೆಗೆ ಸರ್ಕಾರ ಚಿಂತನೆ ನಡೆಸಿದೆ ; ಇಂತಹ ವಿದ್ಯುತ್ ಉತ್ಪಾದನೆ ಗುರಿ ಎಷ್ಟು ;

(ಈ) ಈ ಎಲ್ಲಾ ಮೂಲಗಳಿಂದ ಸಂಗ್ರಹಿಸಿರುವ ವಿದ್ಯುತ್ ಉತ್ಪಾದನೆಗೆ ತಗಲುವ ಖರ್ಚು ಎಷ್ಟು ?

## ಮುಜರಾಯಿ ಇಲಾಖೆ ಅನುದಾನ ಕುರಿತು

**ಶ್ರೀ ರಮೇಶ್ ಬಾಬು (ಶಿಕ್ಷಕರ ಕ್ಷೇತ್ರ) –**

೯ (೬೫) ಜವಳಿ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯ ಸರ್ಕಾರವು ಮುಜರಾಯಿ ಇಲಾಖೆಗೆ ಪ್ರಸಕ್ತ ಸಾಲಿನ ಆಯವ್ಯಯದಲ್ಲಿ ಮಂಜೂರು ಮಾಡಿರುವ ಹಣವೆಷ್ಟು ; ಅದರಲ್ಲಿ ಇಲ್ಲಿಯವರೆಗೆ ವಿಧಾನ ಸಭಾವಾರು ಬಿಡುಗಡೆಯಾಗಿರುವ ಹಣವೆಷ್ಟು ; (ವಿವರಗಳನ್ನು ನೀಡುವುದು)

(ಆ) ಮುಜರಾಯಿ ಇಲಾಖೆಯು ದಿ: ೦೧.೦೪.೨೦೧೭ರಿಂದ ಇಲ್ಲಿಯವರೆಗೆ ಯಾವ ಯಾವ ದೇವಾಲಯಗಳಿಗೆ ಎಷ್ಟೆಷ್ಟು ಅನುದಾನವನ್ನು ಬಿಡುಗಡೆ ಮಾಡಿದೆ ; ಇವುಗಳಲ್ಲಿ ಎಷ್ಟು ಕಾಮಗಾರಿಗಳು ಪ್ರಾರಂಭಗೊಂಡಿರುತ್ತವೆ ; ಎಷ್ಟು ಕಾಮಗಾರಿಗಳು ಬಾಕಿ ಇರುತ್ತದೆ ;

(ಇ) ಮುಜರಾಯಿ ಇಲಾಖೆ ವತಿಯಿಂದ ವಿಶೇಷ ಅನುದಾನವನ್ನು ಕೋರಿ ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆಯೇ ; ಸಲ್ಲಿಸಿದ್ದಲ್ಲಿ, ಪ್ರಸ್ತಾಪಿಸಿರುವ ಮೊತ್ತವೆಷ್ಟು ;

(ಈ) ಸನ್ಮಾನ್ಯ ಮುಖ್ಯಮಂತ್ರಿಗಳ ಆದೇಶದ ಮೇಲೆ ದಿ: ೦೧.೦೪.೨೦೧೭ರಿಂದ ಇಲ್ಲಿಯವರೆಗೆ ಮುಜರಾಯಿ ಇಲಾಖೆಯಲ್ಲಿ ಎಷ್ಟು ದೇವಾಲಯಗಳ ಅಭಿವೃದ್ಧಿಗೆ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ ? (ವಿಧಾನ ಸಭಾವಾರು ವಿವರ ನೀಡುವುದು)

## ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆ ಕುರಿತು

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೦ (೮೧) ಕೃಷಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆಯಡಿಯಲ್ಲಿ ಇದುವರೆಗೆ ವಿಮಾ ಕಂತು ಪಾವತಿಸಿ ನೋಂದಾಯಿಸಿರುವ ರೈತರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ೨೦೧೬–೧೭ ಮತ್ತು ೨೦೧೭–೧೮ನೇ ಸಾಲಿನಲ್ಲಿ ಬೆಳೆ ವಿಮೆ ವಿತರಣೆ ಮಾಡಿರುವ ರೈತರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಯಾವ ಯಾವ ಬೆಳೆಗಳಿಗೆ ಎಷ್ಟು ವಿಮಾ ಹಣ ಪಾವತಿಸಲಾಗಿದೆ ; ಯಾವ ಮಾನದಂಡದ ಮೇಲೆ ಬೆಳೆ ನಷ್ಟ ಅಂದಾಜು ಮಾಡಲಾಗುತ್ತಿದೆ ? (ವಿವರ ನೀಡುವುದು)

## ಮಾವಿನಕಟ್ಟೆ–ಕಿಕ್ಕರಳ್ಳಿ ರಸ್ತೆ ದುರಸ್ತಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೧೧ (೩೧) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೊಡಗು ಜಿಲ್ಲೆಯ ಮಾವಿನಕಟ್ಟೆ–ಕಿಕ್ಕರಳ್ಳಿ ರಸ್ತೆಯು ತುಂಬಾ ಹಾಳಾಗಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸದರಿ ರಸ್ತೆಯ ಅಗಲೀಕರಣ, ದುರಸ್ತಿ ಹಾಗೂ ಡಾಂಬರೀಕರಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಯಾವ ಕಾಲಮಿತಿಯೊಳಗೆ ಸದರಿ ರಸ್ತೆಯನ್ನು ಅಭಿವೃದ್ಧಿಪಡಿಸಿ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆಯನ್ನು ತಪ್ಪಿಸಲಾಗುವುದು ?

## ಸಹಕಾರಿ ಬ್ಯಾಂಕುಗಳಲ್ಲಿ ರೈತರ ಸಾಲಮನ್ನಾ ಮಾಡಿರುವ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೧೨ (೮೮) ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಈ ಹಿಂದಿನ ಆರ್ಥಿಕ ವರ್ಷದಲ್ಲಿ ಸರ್ಕಾರ ಸಹಕಾರಿ ಬ್ಯಾಂಕ್‌ಗಳಲ್ಲಿ ರೈತರ ಸಾಲ ಮನ್ನಾ ಯೋಜನೆಯನ್ನು ಘೋಷಿಸಿರುವುದರಿಂದ ಬೊಕ್ಕಸಕ್ಕೆ ತಗಲುವ ವೆಚ್ಚವೆಷ್ಟು ;

(ಆ) ರೈತರ ಸಾಲ ಮನ್ನಾ ಯೋಜನೆಯ ಫಲಾನುಭವಿಗಳನ್ನು ಆಯ್ಕೆ ಮಾಡಲು ಇರುವ ಮಾನದಂಡಗಳೇನು ; (ವಿವರ ನೀಡುವುದು)

(ಇ) ರೈತರ ಸಾಲ ಮನ್ನಾ ಯೋಜನೆಯ ಫಲಾನುಭವಿಗಳನ್ನು ಗುರುತಿಸಲಾಗಿದೆಯೇ ; (ಜಿಲ್ಲಾವಾರು ವಿವರ ನೀಡುವುದು)

(ಈ) ರೈತರ ಸಾಲ ಮನ್ನಾ ಯೋಜನೆಗೆ ಈ ಸಾಲಿನಲ್ಲಿ ಎಷ್ಟು ಹಣವನ್ನು ಬಿಡುಗಡೆ ಮಾಡಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ೧೯೮೫–ರಲ್ಲಿ ನಂಜನಗೂಡಿನಲ್ಲಿ ಕುಸಿದುಬಿದ್ದ ಮಿನಿ ವಿಧಾನಸೌಧ ಕಟ್ಟಡದ ತನಿಖೆ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ ) –**

೧೩ (೭೪) ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೧೯೮೮ರಲ್ಲಿ ನಂಜನಗೂಡಿನಲ್ಲಿ ನಿರ್ಮಿಸಿದ್ದ ಮಿನಿ ವಿಧಾನಸೌಧ ಕಟ್ಟಡ ಉದ್ಘಾಟನೆಗೂ ಮೊದಲೆ ಕುಸಿದು ಬಿದ್ದಿರುವುದು ನಿಜವೇ ; ಈ ರೀತಿ ಕಟ್ಟಡ ಕುಸಿಯಲು ಕಾರಣವೇನು ;

(ಆ) ಕಳಪೆ ಕಾಮಗಾರಿಯಿಂದ ಕಟ್ಟಡ ಕುಸಿದು ಬೀಳಲು ಕಾರಣರಾದವರ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಈ ಬಗ್ಗೆ ತನಿಖೆಗೆ ನೇಮಿಸಿರುವ ಲೋಕಾಯುಕ್ತ ಇಲಾಖೆಯು ೨೦೧೪ರಲ್ಲಿ 'ಬಿ' ರಿಪೋರ್ಟ್ ಕೊಡಲು ಕಾರಣ ಏನು ; ತನಿಖಾ ವರದಿಯ ಮಾಹಿತಿ ಒದಗಿಸುವುದು ;

(ಈ) ಲೋಕಾಯುಕ್ತವು 'ಬಿ' ರಿಪೋರ್ಟ್ ಸಲ್ಲಿಸಿರುವುದು ಸಂಸ್ಥೆಯಿಂದ ತನಿಖೆಯು ನ್ಯಾಯ ಸಮ್ಮತವಾಗಿ ನಡೆದಿರುವುದಿಲ್ಲವೆಂಬುದು ಮೇಲ್ನೋಟಕ್ಕೆ ಕಂಡು ಬರುತ್ತದೆ ಈ ಬಗ್ಗೆ ನ್ಯಾಯಸಮ್ಮತವಾದ ತನಿಖೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಆರ್‌ಟಿಪಿಎಸ್/ವೈಟಿಪಿಎಸ್ ಎಲ್ಲಾ ಘಟಕಗಳಲ್ಲಿ ಪೂರ್ಣ ಪ್ರಮಾಣದ ವಿದ್ಯುತ್ ಉತ್ಪಾದನೆ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೧೪ (೦೩) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರಿನಲ್ಲಿ ನಿರ್ಮಿಸಿರುವ ವೈಟಿಪಿಎಸ್ ಎರಡು ವಿದ್ಯುತ್ ಘಟಕಗಳಲ್ಲಿ ಪೂರ್ಣ ಪ್ರಮಾಣದಲ್ಲಿ ವಿದ್ಯುತ್ ಉತ್ಪಾದನೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಆರ್‌ಟಿಪಿಎಸ್/ವೈಟಿಪಿಎಸ್ ಘಟಕಗಳಿಗೆ ಬೇಕಾಗಿರುವ ಕಲ್ಲಿದ್ದಲು ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಆರ್‌ಟಿಪಿಎಸ್/ವೈಟಿಪಿಎಸ್‌ನ ಎಲ್ಲಾ ಘಟಕಗಳಲ್ಲಿ ಪೂರ್ಣ ಪ್ರಮಾಣದಲ್ಲಿ ವಿದ್ಯುತ್ ಉತ್ಪಾದನೆ ಮಾಡಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ಆರ್‌ಟಿಪಿಎಸ್/ವೈಟಿಪಿಎಸ್‌ಗೆ ಭೂಮಿ ನೀಡಿದ (ಲ್ಯಾಂಡ್ ಲೂಸರ್ಸ್) ರೈತರ ಬೇಡಿಕೆಗೆ ಪರಿಹಾರ ನೀಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ದೀನ್ ದಯಾಳ್ ವಿದ್ಯುತ್ ಯೋಜನೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೫ (೧೮೩) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ದೀನ್ ದಯಾಳ ಗ್ರಾಮೀಣ ವಿದ್ಯುತ್ ಯೋಜನೆಯನ್ನು ರಾಜ್ಯದಲ್ಲಿ ಯಾವಾಗ ಪ್ರಾರಂಭಿಸಲಾಯಿತು ; ಇದರ ಮಾರ್ಗಸೂಚಿಗಳಾವುವು ; ಇದರ ಅನುಷ್ಠಾನದ ಹಂತಗಳು ಯಾವುವು ; ಈ ತನಕ ಯಾವ ಯಾವ ಜಿಲ್ಲೆಯಲ್ಲಿ ಯೋಜನೆಯನ್ನು ಪ್ರಾರಂಭಿಸಲಾಗಿದೆ ; ಬಾಕಿಯಿರುವ ಜಿಲ್ಲೆಗಳು ಯಾವುವು; (ಮಾರ್ಗಸೂಚಿ ಆದೇಶದ ಪ್ರತಿ ಅನುಷ್ಠಾನದ ಹಂತಗಳ ಪ್ರತಿ ಒದಗಿಸುವುದು)

(ಆ) ಈ ಯೋಜನೆಯಡಿ ಉಡುಪಿ ಜಿಲ್ಲೆಯಲ್ಲಿ ಗ್ರಾಮ ಪಂಚಾಯಿತಿಯಿಂದ ಸ್ವೀಕೃತವಾದ ಅರ್ಜಿಗಳ ಸಂಖ್ಯೆ ಎಷ್ಟು ; ಈ ಕುಟುಂಬಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಸರ್ಕಾರದ ಕಾಲಮಿತಿಯೇನು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಉಡುಪಿ ಜಿಲ್ಲೆಯಲ್ಲಿ ದೀನ್ ದಯಾಳ ಗ್ರಾಮೀಣ ವಿದ್ಯುತ್ ಯೋಜನೆ ಯಾವಾಗ ಪ್ರಾರಂಭಿಸಲಾಗಿದೆ ; ಈ ಬಗ್ಗೆ ಯಾವ ಸಂಸ್ಥೆಯೊಂದಿಗೆ ಕರಾರು ಮಾಡಿಕೊಳ್ಳಲಾಗಿದೆ ; ಕರಾರು ಮೊತ್ತವೆಷ್ಟು ; ಪ್ರಸ್ತುತ ಯೋಜನೆಯು

ಯಾವ ಹಂತದಲ್ಲಿದೆ ; ಪೂರ್ಣಗೊಳಿಸಲು ಇಲಾಖೆಯು ಹಾಕಿಕೊಂಡ ಕಾಲಮಿತಿ ಯಾವುದು ? (ಕರಾರು ಪತ್ರದ ಪ್ರತಿ ಒದಗಿಸುವುದು)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 904 ಪ್ರತಿಗಳು 1500 - ಪಿ8